# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಕಲಬುರ್ಗಿ ಜಿಲ್ಲೆ ಚಿಂಚೋಳಿ ತಾಲ್ಲೂಕು ಪಂಚಾಯತಿಯಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸಿ ಮರಣ ಹೊಂದಿದ ಸಿಬ್ಬಂದಿಯವರ ಅವಲಂಬಿತರಿಗೆ ಒಂದು ಬಾರಿಯ ಉಪಧನವನ್ನು ಪಾವತಿಸಲು ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ: ಗ್ರಾಅಪ 553 ಎಸ್.ಎಸ್.ಕೆ.2020(ಇ)

**ಪ್ರಸ್ತಾವನೆ:**

ಕಲಬುರ್ಗಿ ಜಿಲ್ಲೆ ಚಿಂಚೋಳಿ ತಾಲ್ಲೂಕು ಪಂಚಾಯತಿಯಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸಿ ಸೇವೆಯಲ್ಲಿರುವಾಗಲೆ ಮರಣ ಹೊಂದಿದ ಶ್ರೀ ಗುರುರಾಜ್ ತಂದೆ ರಾಮುಲು, ಕಿರಿಯ ಇಂಜಿನಿಯರ್ ಇವರು ಚಿಂಚೋಳಿ ತಾಲ್ಲೂಕು ಪಂಚಾಯಿತಿಯಲ್ಲಿ ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಕಾರ್ಯನಿರ್ವಹಿಸಿ ದಿನಾಂಕ:24.09.2018 ರಂದು ಮರಣ ಹೊಂದಿರುತ್ತಾರೆಂದು, ಸದರಿಯವರ ಒಂದು ಬಾರಿಯ ನಿವೃತ್ತಿ/ಮರಣ ಉಪಧನವನ್ನು ಪಾವತಿ ಮಾಡಲು ಲೆಕ್ಕಶೀರ್ಷಿಕೆ :2515-00-102-0-63(251) ರಡಿಯಲ್ಲಿ ರೂ.5,68,930/- ಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಮೇಲೆ (2)ರಲ್ಲಿ ಓದಲಾದ ಕಡತದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ: ಆಇ 222 ವೆಚ್ಚ 6/2021(ಇ) ದಿನಾಂಕ: 21ನೇ ಏಪ್ರಿಲ್ 2021</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಮರಣ ಹೊಂದಿದ ದಿನಗೂಲಿ ಸಿಬ್ಬಂದಿಯವರ ಅವಲಂಬಿತರಿಗೆ ನೌಕರರ ಒಂದು ಬಾರಿಯ ಉಪಧನ ಪಾವತಿಗಾಗಿ ಒಟ್ಟು ರೂ5,68,930.00(ರೂಪಾಯಿ ಐದು ಲಕ್ಷದ ಅರವತ್ತೆಂಟು ಸಾವಿರಗಳು ಒಂಬೈನೂರ ಮೂವತ್ತು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು.

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | 2 | 3 | 4 | 5 |
| 1 | ಚಿಂಚೋಳಿ | 2515-00-102-0-63-251 | 5,68,930.00 | 5,68,930.00 |
| | **ಒಟ್ಟು** | | **5,68,930.00** | **5,68,930.00** |

14631392
30.4.2021

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿರಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು



2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿರವರಿಗೆ
7. ಸಂಬಂಧಿಸಿದ ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ